- ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯು ಎಲ್ಲಾ ದೂರುಗಳನ್ನು ಕಾನೂನು ರೀತಿ ಈಗಾಗಲೇ ಇತ್ಯರ್ಥಗೊಳಿಸಿರುತ್ತದೆ.
- ಆರು ಪ್ರಕರಣಗಳಲ್ಲಿ ಮೊಕದ್ದಮೆ ದಾಖಲು ಮಾಡುವ ಮುಖೇನ ಕ್ರಮ ಕೈಗೊಂಡಿದೆ.

ಇ) ಗಾರ್ಮೆಂಟ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಬಹುತೇಕ ಕಾರ್ಮಿಕರು ಮಾಹೆಯಾನ ರೂ.10,000/– ಕ್ಕಿಂತ ಕಡಿಮೆ ವೇತನ ಪಡೆಯುತ್ತಿದ್ದು, ಈ ಎಲ್ಲಾ ಕಾರ್ಮಿಕರು ಇ.ಎಸ್.ಐ ಯೋಜನೆಗೆ ಒಳಪಟ್ಟಿರುತ್ತಾರೆ. ಅವರಿಗೆ ಮತ್ತು ಅವರ ಕುಟುಂಬ ವರ್ಗಕ್ಕೆ ಆರೋಗ್ಯ ರಕ್ಷಣೆಯನ್ನು ಇಎಸ್ಐ ಒದಗಿಸುತ್ತದೆ. ಅಲ್ಲದೆ 500 ಜನ ಕಾರ್ಮಿಕರಿಗಿಂತ ಹೆಚ್ಚಿನ ಕಾರ್ಮಿಕರನ್ನು ನೇಮಿಸಿಕೊಂಡಿರುವ ಕಾರ್ಖಾನೆಗಳಲ್ಲಿ ಕಾರ್ಖಾನೆಗಳ ಕಾಯ್ದೆ 1948ರ ಅಡಿಯಲ್ಲಿ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತಿದೆ. ಕಾರ್ಮಿಕರ ಹಿತ ಕಾಪಾಡುವ ದೃಷ್ಟಿಯಿಂದ ಸರ್ಕಾರ ಕಳೆದ ಎರಡೂವರೆ ವರ್ಷಗಳಿಂದ ಮಹಿಳಾ ಹಕ್ಕು ತರಬೇತಿ ಮತ್ತು ಸುರಕ್ಷತಾ ಉಸ್ತುವಾರಿ ಕೇಂದ್ರ ಎಂಬ ಯೋಜನೆ ಅಡಿ ಹಲವಾರು ಕಾನೂನು ಅರಿವು ಕಾರ್ಯಕ್ರಮ ಗಳನ್ನು ಹಮ್ಮಿಕೊಳ್ಳುತ್ತಿದೆ.

ಉದ್ಯೋಗ ರಕ್ಷಣೆ ನೀಡಲು ಈಗಾಗಲೇ ಹಲವಾರು ಕಾರ್ಮಿಕರ ಕಾನೂನುಗಳು ಜಾರಿಯಲ್ಲಿರುತ್ತವೆ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳು ಸಮರ್ಥನೀಯವಾಗಿ ಜಾರಿಗೆ ತರುವಲ್ಲಿ ಕಾರ್ಯನಿರತವಾಗಿವೆ. ಮೇಲಿನ ವಿಷಯಗಳಲ್ಲಿ ದೂರುಗಳು ಸ್ವೀಕೃತವಾದಲ್ಲಿ ಅವುಗಳನ್ನು ನಿವಾರಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ಅನುಷ್ಠಾನ

863 (1481) ಶ್ರೀ. ಹ್ಯಾರೀಸ್ ಎನ್.ಎ (ಶಾಂತಿನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ಅನುಷ್ಠಾನದ ಕುರಿತಾದ ವಿವರಗಳೇನು;

ಆ) ಯೋಜನೆಯ ಫಲಾನುಭವಿಗಳಿಗೆ ವಿಧಿಸಿರುವ ಅರ್ಹತೆ ಮತ್ತಿತರ ವಿವರಗಳೇನು;

ಇ) ರಾಜ್ಯದಾದ್ಯಂತ ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ; ಇಲ್ಲವಾದಲ್ಲಿ, ಕಾರಣಗಳೇನು; ಎಲ್ಲಾ ಅರ್ಹ ನಾಗರೀಕರಿಗೆ ಯೋಜನೆಯ ಸೌಲಭ್ಯವನ್ನು ಒದಗಿಸಿಕೊಡಲು ಸರಕಾರದ ಕ್ರಮಗಳೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಮತ್ತು ಆ) ಗುಲ್ಬರ್ಗಾ ಕಂದಾಯ ವಿಭಾಗದ ಬೀದರ್, ಗುಲ್ಬರ್ಗಾ, ರಾಯಚೂರು, ಕೊಪ್ಪಳ, ಯಾದಗೀರ್, ಬಳ್ಳಾರಿ ಈ 6 ಜಿಲ್ಲೆಗಳಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದವರಿಗೆ ಮಾರಣಾಂತಕ ಕಾಯಿಲೆಗಳ ಚಿಕಿತ್ಸೆಗಾಗಿ "ವಾಜಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದ್ದು, ಅದರಡಿ ಪ್ರತಿ ಕುಟುಂಬಕ್ಕೆ ಫ್ಯಾಮಿಲಿ ಪೋಟರ್ ಆಧಾರದ ಮೇಲೆ ರೂ.1.50 ಲಕ್ಷಗಳಿಂದ ರೂ.2.00 ಲಕ್ಷಗಳವರೆಗೆ ಗುರುತಿಸಲ್ಪಟ್ಟ ಸರ್ಕಾರಿ/ಖಾಸಗಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸಾ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಇ) ಮೇಲೆ ತಿಳಿಸಿದಂತೆ ಗುಲ್ಬರ್ಗಾ ಕಂದಾಯ ವಿಭಾಗದ 6 ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದ್ದು, ರಾಜ್ಯದ ಇತರೆ ವಿಭಾಗಗಳಿಗೆ ಹಂತ–ಹಂತವಾಗಿ ವಿಸ್ತರಿಸಬೇಕಾಗುತ್ತದೆ.

ಅಸಂಘಟಿತ ಕಾರ್ಮಿಕರ ಭದ್ರತಾ ಮಂಡಳಿ

865 (1483) ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗಾಗಿ ಅಸ್ತಿತ್ವಕ್ಕೆ ಬಂದ ಭದ್ರತಾ ಮಂಡಳಿಯ ಕುರಿತು ವಿವರಗಳೇನು; ಅಸಂಘಟಿತ ಕಾರ್ಮಿಕರಿಗೆ ಭದ್ರತೆಯನ್ನು ಒದಗಿಸಿಕೊಡುವ ಪ್ರಮುಖ ಅಂಶಗಳೇನು;

ಆ) ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಸರ್ಕಾರ ಅನುಷ್ಠಾನಗೊಳಿಸಲಿರುವ ಕಲ್ಯಾಣ ಕಾರ್ಯಕ್ರಮಗಳೇನು;

ಇ) ಅಸಂಘಟಿತ ವಲಯದ ಕಾರ್ಮಿಕರುಗಳ ಸಂರಕ್ಷಣೆಗಾಗಿ ಪ್ರಸ್ತುತ ಸರ್ಕಾರ ಜಾರಿಗೊಳಿಸಿರುವ ಕಾರ್ಯ ಕ್ರಮಗಳೇನು?